# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : 942 |
| ಸದಸ್ಯರ ಹೆಸರು | : ಶ್ರೀ ಎನ್.ಎಸ್.ಬೋಸ್‌ರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 12.03.2020 |
| ಉತ್ತರಿಸುವ ಸಚಿವರು | : ಜಲ ಸಂಪನ್ಮೂಲ ಸಚಿವರು |

| ಅ.<br>ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | NRBC 0 ರಿಂದ 95 ಕಿ.ಮೀ. ರವರೆಗೂ ಕಾಲುವೆಯ ಆಧುನೀಕರಣಕ್ಕೆ ಸರ್ಕಾರ ನೀಡಿರುವ ಅನುದಾನ ಎಷ್ಟು; ಕಾಲುವೆಯ ಆಧುನೀಕರಣದ ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ; | ನಾರಾಯಣಪೂರ ಬಲದಂಡೆ ಕಾಲುವೆ (NRBC) ಕಿ.ಮೀ.0.00 ರಿಂದ 95.00 ವರೆಗಿನ ಕಾಲುವೆ ಆಧುನೀಕರಣಕ್ಕಾಗಿ ಸರ್ಕಾರವು ಆದೇಶ ದಿ:18.07.2019 ರನ್ವಯ ರೂ.750.00 ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿರುತ್ತದೆ.<br><br>ಈಗಾಗಲೇ ಸದರಿ ಆಧುನೀಕರಣ ಕಾಮಗಾರಿಯನ್ನು ಡಿಸೆಂಬರ್ 2019ರಲ್ಲಿ ಗುತ್ತಿಗೆ ವಹಿಸಲಾಗಿದ್ದು, ಪ್ರಸ್ತುತ ಕಾಲುವೆ ಜಾಲದಡಿ ಹಿಂಗಾರು ಹಂಗಾಮಿ ನೀರಾವರಿಗಾಗಿ ನೀರನ್ನು ಹರಿಬಿಟ್ಟಿರುವ ಕಾರಣ ಕಾಮಗಾರಿ ನಿರ್ಮಾಣ ಸಾಮಗ್ರಿಗಳನ್ನು ಸಂಗ್ರಹಿಸಿ, ಅಗತ್ಯ ಸಿದ್ಧತೆಯನ್ನು ಮಾಡಲಾಗುತ್ತಿದ್ದು, ಕಾಲುವೆಯಲ್ಲಿ ನೀರನ್ನು ನಿಲ್ಲಿಸಿದ ನಂತರ ಆಧುನೀಕರಣ ಕಾಮಗಾರಿ ಪ್ರಾರಂಭಿಸಲಾಗುವುದು. |
| ಆ) | ತುಂಗಭದ್ರಾ ಎಡದಂಡೆ ಕಾಲುವೆಯ ನವಲಿ ಗ್ರಾಮದ ಹತ್ತಿರ ಸಮತೋಲನ ಜಲಾಶಯ ನಿರ್ಮಿಸುವುದಕ್ಕೆ ವಿಸ್ತೃತ ಯೋಜನಾ ವರದಿಯನ್ನು ಸಿದ್ಧಪಡಿಸಲು ಸರ್ಕಾರ ನೀಡಿರುವ ಅನುದಾನ ಎಷ್ಟು; ಇದಕ್ಕಾಗಿ ಟೆಂಡರ್ ಕರೆಯಲಾಗುವುದು ಯಾವಾಗ; | 2020-21ರ ಆಯವ್ಯಯದಲ್ಲಿ ತುಂಗಭದ್ರಾ ಜಲಾಶಯದ ನೀರಿನ ಸಂಗ್ರಹಣಾ ಸಾಮರ್ಥ್ಯದ ಕೊರತೆಯನ್ನು ನೀಗಿಸಲು ಪರ್ಯಾಯ ಹರಿವು ನಾಲೆ ಮೂಲಕ ನವಲಿ ಹತ್ತಿರ ಸಮತೋಲನ ಜಲಾಶಯ ನಿರ್ಮಿಸುವ ಯೋಜನೆಯ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲು ರೂ.20.00 ಕೋಟಿಗಳ ಅನುದಾನವನ್ನು ಒದಗಿಸುವ ಬಗ್ಗೆ ಘೋಷಣೆಯಾಗಿರುತ್ತದೆ. ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |
| ಇ) | ಕೃಷ್ಣಾ ನದಿಯ ಗೂಗಲ್ ಬ್ಯಾರೇಜ್ ನಿಂದ ಗಣೆಕಲ್ ಜಲಾಶಯಕ್ಕೆ ನೀರು ತುಂಬಿಸುವ ಯೋಜನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸುವುದು ಯಾವಾಗ; ಈ ಯೋಜನೆಯ ಮಂಜೂರಾತಿಗೆ ಬಾಕಿ ಇರುವ ಅನುದಾನ ಎಷ್ಟು? | ಕೃಷ್ಣಾ ನದಿಯಿಂದ ಗಣೆಕಲ್ ಸಮತೋಲನ ಜಲಾಶಯಕ್ಕೆ ನೀರು ಪೂರೈಸುವ ಯೋಜನೆಗೆ ಈಗಾಗಲೇ ಸರ್ಕಾರವು ದಿನಾಂಕ:25/10/2019 ರಲ್ಲಿ ರೂ.189.22 ಕೋಟಿ ಮೊತ್ತದ ಯೋಜನಾ ವರದಿಗೆ ತಾತ್ವಿಕ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಯ ವೆಚ್ಚವನ್ನು ರೂ.140.00 ಕೋಟಿಗಳಿಗೆ ಸೀಮಿತಗೊಳಿಸಿ ಆದೇಶಿಸಿದೆ.<br><br>ಸದರಿ ಯೋಜನಾ ಕಾಮಗಾರಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಜಸಂಇ 17 ಡಬ್ಲ್ಯೂಬಿಎಂ 2020

(ರಮೇಶ್ ಲ. ಜಾರಕಿಹೊಳಿ)
ಜಲ ಸಂಪನ್ಮೂಲ ಸಚಿವರು